# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 10-03-2021 ಪ್ರಶ್ನೆ ಸಂಖ್ಯೆ : 140 (1028)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು )

ಉತ್ತರ ನೀಡಬೇಕಾದ ದಿನಾಂಕ : 10-03-2021

ಉತ್ತರಿಸುವ ಸಚಿವರು: ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ವಿಷಯ : ರಾಜ್ಯದ ಹಿಂದುಳಿದ ವರ್ಗಗಳ ಜನಾಂಗದ ಸ್ಥಿತಿಗತಿಗಳ ಕುರಿತು

(ಅ) ರಾಜ್ಯ ಸರ್ಕಾರದ ಅಧಿಸೂಚನೆ ದಿ:30 ಮಾರ್ಚ್ 2002 ರಂತೆ ಇರುವ ಪ್ರವರ್ಗ-1 ಮತ್ತು ಪ್ರವರ್ಗ-2ಎ ರಲ್ಲಿ ಬರುವ ಎಲ್ಲಾ ಜಾತಿಗಳ ಸ್ಥಿತಿಗತಿಗಳ ಬಗ್ಗೆ ಅನ್ವೇಷಿಸಿ, ಇವತ್ತಿನ ಅವರ ಸಾಮಾಜಿಕ ಹಾಗೂ ಶೈಕ್ಷಣಿಕ ಸ್ಥಿತಿಗತಿಗಳನ್ನು ಕಂಡುಕೊಳ್ಳಲು ಸಂವಿಧಾನದ ಅನುಚ್ಛೇಧ 340ರ ಪ್ರಕಾರ ಕೂಲಂಕಶವಾಗಿ ಪರಿಶೀಲಿಸಿ ಅವರ ಸರ್ವತೋಮುಖ ಏಳಿಗೆಗೆ ಅನುಗುಣವಾಗಿ ಸರ್ಕಾರದಿಂದ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಆ) 2017ರಲ್ಲಿ ರಾಜ್ಯದ ಶಾಶ್ವತ ಹಿಂದುಳಿದ ಆಯೋಗದ ವತಿಯಿಂದ 6.5 ಕೋಟಿ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ (ಜಾತಿ ಗಣತಿ) ಸಾರ್ವಜನಿಕರ ಹಣ ಸುಮಾರು 262 ಕೋಟಿ ರೂಪಾಯಿಗಳ ವೆಚ್ಚ ಮಾಡಿರುವುದು ನಿಜವೇ; ಮತ್ತು ಈ ಸಮೀಕ್ಷೆಯ ವರದಿಯು ಪೂರ್ಣಗೊಂಡು ಬಿಡುಗಡೆಗೆ ಸಿದ್ದವಾಗಿದೆಯೇ; ಹಾಗಿದ್ದಲ್ಲಿ ಸರ್ಕಾರದಿಂದ ವರದಿಯನ್ನು ಬಹಿರಂಗಗೊಳಿಸಲು ಇರುವ ತೊಡಕುಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಸಂವಿಧಾನದ ಅನುಚ್ಛೇದ 15(6) ಮತ್ತು 16(6)ರ ಪ್ರಕಾರ ಎಲ್ಲಾ ಜನಾಂಗದಲ್ಲಿ ಆರ್ಥಿಕ ದುರ್ಬಲ ವರ್ಗದವರಿಗೆ ಶೈಕ್ಷಣಿಕ ಮತ್ತು ಉದ್ಯೋಗದಲ್ಲಿ ಶೇ.10ರ ಮೀಸಲಾತಿ ಕಲ್ಪಿಸಿ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರಲಾಗಿದೆಯೇ; ಈ ಬಗ್ಗೆ ಕೈಗೊಂಡ ಕ್ರಮಗಳಾವುವು? (ವಿವರ ನೀಡುವುದು)